ಸಹ ಈ ಒಂದು ಕಾರ್ಯಕ್ರಮವನ್ನು ಹಂತ ಹಂತವಾಗಿ ಹಣದ ಲಭ್ಯತೆ ಮೇಲೆ ನಾವು ಪ್ರಾರಂಭ ಮಾಡುತ್ತೇವೆಂದು ಹೇಳುವುದಕ್ಕೆ ಬಯಸುತ್ತೇನೆ.

ಪ್ರಾಥಮಿಕ ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರಗಳಾಗಿ ಪರಿವರ್ತಿಸುವ ಬಗ್ಗೆ.

50 (308) ಶ್ರೀ ಮಹದೇವಪ್ರಸಾದ ಹೆಚ್ ಎಸ್:(ಗುಂಡ್ಲುಪೇಟೆ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರಗಳಾಗಿ ಪರಿವರ್ತಿಸಲಾಗಿದೆಯೇ

ಆ) ಹಾಗಿದ್ದಲ್ಲಿ, ಅವುಗಳಿಗೆ ಅಗತ್ಯವಾದ ವೈದ್ಯಾಧಿಕಾರಿ, ಸಿಬ್ಬಂದಿ ನೇಮಕ, ಕಟ್ಟಡ ನಿರ್ಮಾಣ, ಇತರೆ ಮೂಲ ಸೌಕರ್ಯಗಳನ್ನು ಒದಗಿಸಲಾಗಿದೆಯೇ;

ಶ್ರೀ ಬಿ ಶ್ರೀರಾಮುಲು(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಸರ್ಕಾರಿ ಆದೇಶ ದಿನಾಂಕ:2-06-2007 ರಲ್ಲಿ ರಾಜ್ಯದಲ್ಲಿನ 516 ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಆ) ಸದರಿ ಮೇಲ್ದರ್ಜೆಗೇರಿಸಲಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯವಿರುವ ಔಷಧಿಗಳನ್ನು ಒದಗಿಸಲಾಗುತ್ತಿದೆ. ಮೇಲ್ದರ್ಜೆಗೇರಿಸಿದ್ದಕ್ಕೆ ಅನುಗುಣವಾಗಿ ಹೆಚ್ಚುವರಿಯಾಗಿ 3 ಅರೆ ವೈದ್ಯಕೀಯ ಸಿಬ್ಬಂದಿಯನ್ನು ನೀಡಬೇಕಾಗಿದ್ದು, ಶೇಕಡಾ 60 ರಷ್ಟು ಕಟ್ಟಡ ಕಾಮಗಾರಿಯು ಪೂರ್ಣಗೊಂಡ ನಂತರ ಭರ್ತಿ ಮಾಡುವ ಪ್ರಕ್ರಿಯೆ ಪ್ರಾರಂಭಿಸಬೇಕಾಗುತ್ತದೆ. ಪ್ರಸ್ತುತ ಇಂತಹ 45 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿವೆ.

ಶ್ರೀ ಹೆಚ್ ಎಸ್ ಮಹದೇವಪ್ರಸಾದ್: ಮಾನ್ಯ ಅಧ್ಯಕ್ಷರೆ, ಈ ಹಿಂದೆ ರಾಜ್ಯ ಸರ್ಕಾರ 516 ಪ್ರಾಥಮಿಕ ಆರೋಗ್ಯ ಘಟಕಗಳನ್ನು, ಪ್ರಾಥಮಿಕ ಆರೋಗ್ಯ ಕೇಂದ್ರವೆಂದು ಮೇಲ್ದರ್ಜೆಗೆ ಏರಿಸಿ ಸುಮಾರು 2 ವರ್ಷಗಳಾಗಿದ್ದರೂ ಕೂಡ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನಾಮಫಲಕ ಮಾತ್ರ ಬದಲಾವಣೆ

ಆಗಿವೆ. ಅದರೆ ಮೇಲ್ದರ್ಜೆಗೇರಿಸಿದಂತಹ ಕೇಂದ್ರಗಳಲ್ಲಿ ಇರಬೇಕಾದಂತಹ ಹೆಚ್ಚುವರಿ ಸಿಬ್ಬಂದಿ ಆಗಲಿ, ಆಥವಾ ಅದಕ್ಕೆ ಬೇಕಾದಂತಹ ಔಷದಿಗಳು, ಪೀಠೋಪಕರಣಗಳು ಮತ್ತು ಕಟ್ಟಡಗಳು ಇವು ಯಾವುವೂ ಕೂಡ ಈ 516 ಕೇಂದ್ರಗಳಲ್ಲಿ ಇದುವರೆಗೆ ಮಾಡತಕ್ಕಂತಹ ಕ್ರಮ ಕೈಗೊಂಡಿಲ್ಲ. ಉತ್ತರದಲ್ಲಿ ಮಾನ್ಯ ಸಚಿವರು 45 ಕೇಂದ್ರಗಳಲ್ಲಿ ಕಟ್ಟಡಗಳು ಪ್ರಾರಂಭ ಮಾಡಿದ್ದೇವೆ, ಅವು ಶೇಕಡ 60 ರಷ್ಟು ಕಟ್ಟಡ ಕಾಮಗಾರಿ ಪೂರ್ಣಗೊಂಡ ಮೇಲೆ ಹಂತ ಹಂತವಾಗಿ ಈ ಸಿಬ್ಬಂದಿಯನ್ನು ನೇಮಿಸುತ್ತೇವೆಂದು ಹೇಳಿದ್ದಾರೆ. ಈ ಪ್ರಮಾಣದಲ್ಲಿ ಕಟ್ಟಡ ನಿರ್ಮಾಣ ಕಾರ್ಯ ಮಾಡಿ ಆ ನಂತರ ಸಿಬ್ಬಂದಿ ನೇಮಿಸುತ್ತೇವೆಂದು ಹೇಳಿದ್ದಾರೆ. ಏನು ಈ ಹಿಂದೆ ಸರ್ಕಾರ 516 ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಿದೆ ಇದರಿಂದ ಯಾವುದೇ ರೀತಿಯ ಅನುಕೂಲತೆಗಳು ಸಾರ್ವಜನಿಕರಿಗೆ ಸಿಗುವುದಕ್ಕೆ ಸಾಧ್ಯವಾಗುವುದಿಲ್ಲ. ಆದ್ದರಿಂದ ಈ ಬಗ್ಗೆ ಮಾನ್ಯ ಸಚಿವರು ತೀವ್ರವಾದ ಗಮನಹರಿಸಿ PHU ನಲ್ಲಿ ನಾಲ್ಕು ಹುದ್ದೆ ಇದ್ದರೆ PHCಯಲ್ಲಿ 8 ಹುದ್ದೆಗಳು ಇರಬೇಕು. ಕನಿಷ್ಟ ಎರಡು ಹುದ್ದೆಗಳನ್ನಾದರೂ ಈ ಸಾಲಿನಲ್ಲಿ increase ಮಾಡುವುದು ಮತ್ತು ಎಲ್ಲೆಲ್ಲಿ PHU ನ ಸ್ವಂತ ಕಟ್ಟಡಗಳಿವೆ ಅಂತಹ ಕಡೆಗೆ ಪೂರ್ಣ ಪ್ರಮಾಣದ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯವಸ್ಥೆ ಮಾಡತಕ್ಕಂತಹ ಕೆಲಸವನ್ನು ಮಾಡಬೇಕೆಂದು ಮಾನ್ಯ ಸಚಿವರಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

ಶ್ರೀ ಬಿ ಶ್ರೀರಾಮುಲು: ಮಾನ್ಯ ಅಧ್ಯಕ್ಷರೆ, ಸ್ವಾತಂತ್ರ್ಯ ಪೂರ್ವದಲ್ಲಿ 516 ಆರೋಗ್ಯ ಘಟಕಗಳು ಇದ್ದವು. ನಂತರ ಈ ರಾಜ್ಯದಲ್ಲಿ 2758 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕೆಲಸ ಮಾಡುತ್ತಿವೆ. ಇವುಗಳನ್ನೆಲ್ಲಾ ಸರಿಪಡಿಸಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳಾಗಿ ಪರಿವರ್ತನೆ ಮಾಡಿದ ನಂತರ ಸಿಬ್ಬಂದಿ ಹೆಚ್ಚಿಗೆ ಮಾಡಬೇಕು, ಕಾಮಗಾರಿಗಳು 45% ಮುಗಿದ ನಂತರ ಅವರಿಗೆ ಸಿಬ್ಬಂದಿ ವ್ಯವಸ್ಥೆ ಮಾಡಿಕೊಡಬೇಕಾಗಿದೆ. ರಾಜ್ಯದಲ್ಲಿ ವೈದ್ಯರು ಹಾಗೂ ಪ್ಯಾರಾ ಮೆಡಿಕಲ್ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳುತ್ತಿದ್ದೇವೆ. ಮಾನ್ಯ ಮಹದೇವಪ್ರಸಾದ್‌ರವರು ಹೇಳಿದಂತಹ ಪ್ರಶ್ನೆ ಬಹಳ ಚೆನ್ನಾಗಿದೆ. ಇತ್ತೀಚೆಗೆ

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ದಾದಿಯರ ಕೊರತೆ ಬಹಳಷ್ಟು ಕಂಡುಬರುತ್ತಿದೆ. ದಾದಿಯರ ನೇಮಕಾತಿ ಪ್ರಕ್ರಿಯೆ ಬಹಳಷ್ಟು ಮುಗಿದಿದೆ. ಆದಷ್ಟು ಬೇಗ ನಾನು ವ್ಯವಸ್ಥೆ ಮಾಡಿ ಕೊಡುತ್ತೇನೆ.

ಪಡಿತರ ಆಹಾರ ಪದಾರ್ಥಗಳ ಕಾಳಸಂತೆ ಮಾರಾಟ ಪ್ರಕರಣಗಳ ಬಗ್ಗೆ

51(453) ಶ್ರೀ ಸುಭಾಷ್ ಆರ್ ಗುತ್ತೇದಾರ್:(ಅಳಂದ) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಆಹಾರಧಾನ್ಯಗಳು ಕಾಳಸಂತೆಯಲ್ಲಿ ಮಾರಾಟ ಮಾಡುವಾಗ ಸಿಕ್ಕಿಬಿದ್ದ ಪ್ರಕರಣಗಳು ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

ಆ) ಇಂತಹ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳು, ಸಂಘ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ಇಂತಹ ಪ್ರಕರಣಗಳನ್ನು ತಡೆಯಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ?

ಶ್ರೀ ಆರ್ ಅಶೋಕ್(ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಸಾರ್ವಜನಿಕ ವಿತರಣೆ ಪದ್ಧತಿಯಡಿಯಲ್ಲಿನ ಪಡಿತರ ಪದಾರ್ಥಗಳ ಮಾರ್ಗ ಪಲ್ಲಟನೆ ಹಾಗೂ ಕಾಳಸಂತೆಯಲ್ಲಿನ ಮಾರಾಟಕ್ಕೆ ಸಂಬಂಧಪಟ್ಟಂತೆ 1187 ಪ್ರಕರಣಗಳನ್ನು ಪತ್ತೆ ಹೆಚ್ಚಲಾಗಿದ್ದು ಇವುಗಳ ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗುವವರ ಮೇಲೆ ಅಗತ್ಯ ವಸ್ತುಗಳ ಕಾಯ್ದೆಯಡಿ ಕ್ರಿಮಿನಲ್ ಮೊಕದ್ದಮೆಗಳನ್ನು ದಾಖಲಿಸಲಾಗಿರುವುದಲ್ಲದೆ, ಇಂತಹ ಪ್ರಕರಣಗಳಲ್ಲಿ ಕರ್ತವ್ಯ ನಿರ್ಲಕ್ಷತೆಗೆ ಕಾರಣರಾದಂತಹ ಇಲಾಖಾ ಸಿಬ್ಬಂದಿ ಹಾಗೂ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿರುತ್ತದೆ.